## ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
## ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್





# 'ಜ್ಯೋತಿ ಸಂಜೀವಿನಿ' ಯೋಜನೆ



ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ತೃತೀಯ ಹಂತದ ಚಿಕಿತ್ಸೆಗಳು ಮತ್ತು ತೃತೀಯ ಹಂತದ ತುರ್ತು ಚಿಕಿತ್ಸೆಗಳನ್ನು ಒದಗಿಸುವುದು 'ಜ್ಯೋತಿ ಸಂಜೀವಿನಿ' ಯೋಜನೆಯ ಉದ್ದೇಶವಾಗಿರುತ್ತದೆ.

ತೃತೀಯ ಹಂತದ 900 ಚಿಕಿತ್ಸಾ ವಿಧಾನಗಳು ಮತ್ತು 134 ತೃತೀಯ ತುರ್ತು ಚಿಕಿತ್ಸಾ ವಿಧಾನಗಳು ಸೇರಿದಂತೆ ಒಟ್ಟು 1034 ಚಿಕಿತ್ಸಾ ವಿಧಾನಗಳಿಗೆ ನೋಂದಾಯಿತ ಸರ್ಕಾರಿ ಮತ್ತು ಖಾಸಗಿ ಆಸ್ಪತ್ರೆಗಳ ಮೂಲಕ ಚಿಕಿತ್ಸೆ ಒದಗಿಸಲಾಗುತ್ತದೆ. ನೋಂದಾಯಿತ ಆಸ್ಪತ್ರೆಗಳ ಪಟ್ಟಿಯು ವೆಬ್‌ಸೈಟ್: www.sast.gov.in/home ನಲ್ಲಿ ಲಭ್ಯವಿರುತ್ತದೆ.

### ಯೋಜನೆಯ ಫಲಾನುಭವಿಗಳು:

ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಕುಟುಂಬದ ಅವಲಂಬಿತ ಸದಸ್ಯರು ಯೋಜನೆಯ ಫಲಾನುಭವಿಗಳಾಗಿರುತ್ತಾರೆ.

### ಫಲಾನುಭವಿ ಸರ್ಕಾರಿ ನೌಕರನ ಗುರುತಿನ ಮಾನದಂಡ:

ರಾಜ್ಯ ಸರ್ಕಾರದ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಹೆಚ್‌ಆರ್‌ಎಂಎಸ್ ಡಾಟಾ ಬೇಸ್‌ನೊಂದಿಗೆ ಸಮನ್ವಯಿತಗೊಂಡಿರುವ ಸರ್ಕಾರಿ ನೌಕರನ ಕೆಜಿಐಡಿ ಪಾಲಿಸಿ ಸಂಖ್ಯೆಯು ಸರ್ಕಾರಿ ನೌಕರರ ಗುರುತಿನ ಮಾನದಂಡವಾಗಿರುತ್ತದೆ.

### ಅರ್ಹತೆ:

ರಾಜ್ಯ ಸರ್ಕಾರದ ನೌಕರರು ಮತ್ತು ಸರ್ಕಾರದ ಸೇವಾ ನಿಯಮಾವಳಿಗಳ ಅಡಿಯಲ್ಲಿ ಬರುವ ಅವರ ಕುಟುಂಬದ ಅವಲಂಬಿತ ಸದಸ್ಯರು ಈ ಯೋಜನೆಯ ವ್ಯಾಪ್ತಿಗೆ ಒಳಪಡುತ್ತಾರೆ. ಕರ್ನಾಟಕ ರಾಜ್ಯ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಾವಳಿ–1963ರ ನಿಯಮ 2(1)ರ (i)(ii) ಮತ್ತು (iii) ರನ್ವಯ ಸರ್ಕಾರಿ ನೌಕರರ ಕುಟುಂಬದ ಅವಲಂಬಿತ ಸದಸ್ಯರನ್ನು ಈ ಕೆಳಕಂಡಂತೆ ವ್ಯಾಖ್ಯಾನಿಸಲಾಗಿರುತ್ತದೆ:

- ಸರ್ಕಾರಿ ನೌಕರರ ಪತ್ನಿ ಅಥವಾ ಪತಿ.
- ಸರ್ಕಾರಿ ನೌಕರರ ತಂದೆ ಮತ್ತು ತಾಯಿ (ಮಲತಾಯಿ ಒಳಗೊಂಡಂತೆ) ಇವರು ಸರ್ಕಾರಿ ನೌಕರರ ಜೊತೆಯಲ್ಲಿ ಸಾಮಾನ್ಯವಾಗಿ ವಾಸವಿರತಕ್ಕದ್ದು ಮತ್ತು ಇವರ ಮಾಸಿಕ ಆದಾಯ ಒಟ್ಟು ರೂ. 6,000/– ಗಳನ್ನು ಮೀರ ತಕ್ಕದ್ದಲ್ಲ.
- ಸರ್ಕಾರಿ ನೌಕರರ ಮೇಲೆ ಸಂಪೂರ್ಣವಾಗಿ ಅವಲಂಬಿಸಿರುವ ಮಕ್ಕಳು (ದತ್ತು ಮಕ್ಕಳು ಮತ್ತು ಮಲ–ಮಕ್ಕಳು ಒಳಗೊಂಡಂತೆ) ಸರ್ಕಾರಿ ನೌಕರರು ತನ್ನ ಕುಟುಂಬದ ಸದಸ್ಯರ ಅವಲಂಬನೆಯ ಕುರಿತು ಪ್ರಮಾಣಿತ ಘೋಷಣೆಯನ್ನು ಸಲ್ಲಿಸತಕ್ಕದ್ದು.

ಈ ಕೆಳಕಾಣಿಸಿದ ಸಂದರ್ಭಗಳನ್ನು ಹೊರತುಪಡಿಸಿ ಫಲಾನುಭವಿಗಳಿಗೆ ಒದಗಿಸುವ ವೈದ್ಯಕೀಯ ನೆರವು ಸಂಪೂರ್ಣವಾಗಿ ನಗದುರಹಿತವಾಗಿರುತ್ತದೆ.

- ಯೋಜನೆಯಲ್ಲಿ ನಿಗದಿಪಡಿಸಿರುವ ಬೆನಿಫಿಟ್ ಪ್ಯಾಕೇಜ್‌ನ ದರಗಳಿಗಿಂತ ಹೆಚ್ಚು ದರದ ಸ್ಟೆಂಟ್, ಪ್ರೋಸ್ತೆಸಿಸ್ ಮತ್ತು ಇಂಪ್ಲಾಂಟ್‌ಗಳ ಅಳವಡಿಕೆಯನ್ನು ಫಲಾನುಭವಿಯು ಬಯಸಿದ್ದಲ್ಲಿ / ಆಯ್ಕೆ ಮಾಡಿಕೊಂಡಲ್ಲಿ.
- ಯೋಜನೆಯಲ್ಲಿ ನಿಗದಿ ಪಡಿಸಿದ ವಾರ್ಡ್ ಸೌಲಭ್ಯಕ್ಕಿಂತ ಉನ್ನತ ದರ್ಜೆಯ ವಾರ್ಡ್ ಸೌಲಭ್ಯಗಳನ್ನು ಫಲಾನುಭವಿಯು ಆಯ್ಕೆ ಮಾಡಿಕೊಂಡಲ್ಲಿ.
- ಮೇಲಿನ ಸಂದರ್ಭಗಳಲ್ಲಿ ಫಲಾನುಭವಿಯು ಹೆಚ್ಚುವರಿ ದರಗಳನ್ನು ಭರಿಸತಕ್ಕದ್ದು.

### ವಾರ್ಡ್ ಸೌಲಭ್ಯಗಳ ವಿವರ :

ವೇತನ ಶ್ರೇಣಿಗನುಗುಣವಾಗಿ ಸರ್ಕಾರಿ ನೌಕರರು ಈ ಕೆಳಕಂಡ ವಾರ್ಡ್‌ಗಳಲ್ಲಿ ಚಿಕಿತ್ಸೆ ಪಡೆಯಲು ಅರ್ಹರಾಗಿರುತ್ತಾರೆ.

| ಕ್ರಮ ಸಂಖ್ಯೆ | ವೇತನ ಶ್ರೇಣಿ | ಪಡೆಯಲರ್ಹವಾದ ವಾರ್ಡ್‌ಗಳ ದರ್ಜೆ/ಸೌಲಭ್ಯಗಳು |
|---|---|---|
| 1) | ಮಾಸಿಕವಾಗಿ ರೂ. 16,000/– ರವರೆಗೆ | ಸಾಮಾನ್ಯ ವಾರ್ಡ್ |
| 2) | ಮಾಸಿಕವಾಗಿ ರೂ. 16,000/– ದಿಂದ ರೂ. 43,200/– ವರೆಗೆ | ಅರೆ–ಖಾಸಗಿ ವಾರ್ಡ್ |
| 3) | ರೂ. 43,201/– ಮತ್ತು ಮೇಲ್ಪಟ್ಟು | ಖಾಸಗಿ ವಾರ್ಡ್ |

### ಮಾಹಿತಿಗಾಗಿ ಸಂಪರ್ಕಿಸಿ

- ಟೋಲ್ ಫ್ರೀ ಸಂಖ್ಯೆ: 1800 425 8330 ಮತ್ತು 1800 425 2646
- ಆರೋಗ್ಯ ಸಹಾಯವಾಣಿ 104,
- ವೆಬ್ ಸೈಟ್: www.sast.gov.in, www.arogya.karnataka.gov.in
- ನೋಂದಾಯಿತ ಆಸ್ಪತ್ರೆಗಳ ಆರೋಗ್ಯ ಮಿತ್ರರು,

**ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್**
ಟಿ.ಟಿ.ಎಂ.ಸಿ. 'ಎ' ಬ್ಲಾಕ್, ಬಿ.ಎಂ.ಟಿ.ಸಿ. ಸಂಕೀರ್ಣ, ಶಾಂತಿನಗರ, ಬೆಂಗಳೂರು–560 027 ದೂರವಾಣಿ ಸಂ.: 080–22536200 ಇ–ಮೇಲ್: directorsast@gmail.com